# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 34
**ಮಾನ್ಯ ಸದಸ್ಯರ ಹೆಸರು** : ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ )
**ಉತ್ತರಿಸಬೇಕಾದ ದಿನಾಂಕ** : 12-09-2022
**ಉತ್ತರಿಸುವ ಸಚಿವರು** : ಪ್ರವಾಸೋದ್ಯಮ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ಜಿಲ್ಲೆಯ ಬಳ್ಳಾರಿ ನಗರದ ಮಧ್ಯ ಭಾಗದಲ್ಲಿರುವ ಏಷ್ಯಾದ 2ನೇ ಅತಿ ದೊಡ್ಡ ಏಕಶಿಲಾ ಬೆಟ್ಟ ಮತ್ತು ಬಳ್ಳಾರಿ ಕೋಟೆ ಪ್ರದೇಶವು ರಾಜ್ಯ ಪುರಾತತ್ವ ಇಲಾಖೆಯಡಿಯಲ್ಲಿ ಇದೆಯೇ; ಇದ್ದಲ್ಲಿ, ಪುರಾತತ್ವ ಇಲಾಖೆಯು ಈ ಪ್ರದೇಶವನ್ನು ಸಂರಕ್ಷಿಸಲು ಇಲ್ಲಿಯವರೆಗೂ ಮಾಡಲಾಗಿರುವ ಕಾರ್ಯಗಳೇನು; (ಮಾಹಿತಿ ನೀಡುವುದು) | ಬಳ್ಳಾರಿ ಜಿಲ್ಲೆಯ ಬಳ್ಳಾರಿ ನಗರದ ಮಧ್ಯ ಭಾಗದಲ್ಲಿರುವ ಕೋಟೆಯು ರಾಷ್ಟ್ರೀಯ ಸಂರಕ್ಷಿತ ಸ್ಮಾರಕವಾಗಿದ್ದು, ಕೇಂದ್ರ ಸಂಸ್ಕೃತಿ ಮಂತ್ರಾಲಯದ ಅಧೀನದಲ್ಲಿರುವ ಭಾರತೀಯ ಪುರಾತತ್ವ ಸರ್ವೇಕ್ಷಣೆ, ಹಂಪಿ ವೃತ್ತದ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಈ ಸ್ಮಾರಕದ ಸಂರಕ್ಷಣೆ, ನಿರ್ವಹಣೆ ಮತ್ತು ಅಭಿವೃದ್ಧಿಯನ್ನು ಭಾರತೀಯ ಪುರಾತತ್ವ ಸರ್ವೇಕ್ಷಣೆ ಇಲಾಖೆಯೇ ಕೈಗೊಳ್ಳಲಿದೆ. |
| ಆ) | ಈ ಪ್ರದೇಶವನ್ನು ಪ್ರವಾಸೋದ್ಯಮ ದೃಷ್ಟಿಯಲ್ಲಿ ಅಭಿವೃದ್ಧಿ ಪಡಿಸಲು ಸರ್ಕಾರದ ಯೋಜನೆಗಳೇನು; ಇಲ್ಲವಾದಲ್ಲಿ ಪ್ರವಾಸಿಗರಿಗೆ ಈ ಪ್ರದೇಶವನ್ನು ಪ್ರಚಾರ ಪಡಿಸಲು ಯೋಜನೆ ರೂಪಿಸಲು ಇರುವ ತೊಂದರೆಗಳೇನು; (ವಿವರ ನೀಡುವುದು) | ಬಳ್ಳಾರಿ ಜಿಲ್ಲೆಯ ಬಳ್ಳಾರಿ ಕೋಟೆ ಪ್ರದೇಶವನ್ನು ಅಭಿವೃದ್ಧಿಪಡಿಸಲು ಈ ಕೆಳಕಂಡ ಪ್ರಸ್ತಾವನೆಗಳು ಸ್ವೀಕೃತವಾಗಿರುತ್ತದೆ.<br><br>1. ಬಳ್ಳಾರಿ ಜಿಲ್ಲೆಯ ಬಳ್ಳಾರಿ ಕೋಟೆ ಪ್ರದೇಶದಲ್ಲಿ ರೋಪ್‌ವೇ ಅಭಿವೃದ್ಧಿ ಪಡಿಸಲು ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಕಾಮಗಾರಿಯನ್ನು ಕೈಗೊಳ್ಳುವ ಕುರಿತು ಅಥವಾ ಭಾರತೀಯ ಪುರಾತತ್ವ ಸಂರಕ್ಷಣಾ ಇಲಾಖೆ (ASI) ಯಿಂದ ಕಾಮಗಾರಿಯನ್ನು ಕೈಗೊಳ್ಳಲು ಸಾಧ್ಯವಾಗದೇ ಇದ್ದಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ಮತ್ತು ಪ್ರವಾಸೋದ್ಯಮ ಇಲಾಖೆಯಿಂದ ರೋಪ್‌ವೇ ಕೈಗೊಳ್ಳಲು ಭಾರತೀಯ ಪುರಾತತ್ವ ಸಂರಕ್ಷಣಾ ಇಲಾಖೆ (ASI) ಯಿಂದ ನಿರಾಕ್ಷೇಪಣಾ (ಎನ್.ಓ.ಸಿ) ಪತ್ರ ಬಂದ ನಂತರ ಕ್ರಮ ವಹಿಸಲಾಗುವುದು.<br><br>2. ಬಳ್ಳಾರಿ ನಗರದಲ್ಲಿರುವ ಐತಿಹಾಸಿಕ ಕೋಟೆಯನ್ನು ಪ್ರವಾಸಿ ತಾಣವಾಗಿಸಲು ಬಣ್ಣದ ಬೆಳಕಿನ ವ್ಯವಸ್ಥೆಯನ್ನು ಅಳವಡಿಸಿ ಅಭಿವೃದ್ಧಿ ಪಡಿಸುವ ಸಂಬಂಧ ಪ್ರಸ್ತಾವನೆ ಸ್ವೀಕೃತವಾಗಿದ್ದು, ಸದರಿ ಕೋಟೆಯು ಭಾರತೀಯ ಪುರಾತತ್ವ ಸರ್ವೇಕ್ಷಣೆ (ASI)ಯ ವ್ಯಾಪ್ತಿಗೆ ಒಳಪಟ್ಟಿದ್ದು, ಸದರಿಯವರಿಂದ ನಿರಾಕ್ಷೇಪಣಾ ಪತ್ರ ಬಂದ ನಂತರ ಕ್ರಮವಹಿಸಲಾಗುವುದು. |

| | | |
|---|---|---|
| ಇ) | ಈ ಬೆಟ್ಟ ಮತ್ತು ಕೋಟೆ ಪ್ರದೇಶವು ಪುರಾತತ್ವ ಇಲಾಖೆಗೆ ಒಳಪಟ್ಟರೆ, ಅಲ್ಲಿ ಪಾಲಿಸಬೇಕಾದ ನೀತಿ/ ನಿಯಮಗಳೇನು; ಈ ಪ್ರದೇಶದಲ್ಲಿ ಮನೆಗಳನ್ನು ನಿರ್ಮಿಸಲು ಇರುವ ನಿಬಂಧನೆಗಳೇನು; ಈ ನಿಬಂಧನೆಗಳನ್ನು ಮೀರಿ ರಕ್ಷಿತ ಬೆಟ್ಟ ಮತ್ತು ಕೋಟೆ ಪ್ರದೇಶದಲ್ಲಿ ಮನೆಗಳನ್ನು ನಿರ್ಮಿಸುತ್ತಿರುವವರನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | The Ancient Monuments and Archaeological Sites and Remains Act 1958 ರನ್ವಯ ರಕ್ಷಿತ ಪ್ರದೇಶದಲ್ಲಿ (Regulated Area) ಕಟ್ಟಡ ನಿರ್ಮಾಣಗಳಿಗೆ ನಿಗಧಿತ ನಮೂನೆ-1ರಡಿ ಅರ್ಜಿಯನ್ನು ದಾಖಲೆಗಳೊಂದಿಗೆ ಪ್ರಾಂತೀಯ ನಿರ್ದೇಶಕರು, ಭಾರತೀಯ ಪುರಾತತ್ವ ಸರ್ವೇಕ್ಷಣೆ (ದಕ್ಷಿಣ), ಬೆಂಗಳೂರು, ಇವರಿಗೆ ಅರ್ಜಿ ಸಲ್ಲಿಸಿದ ನಂತರ, ಸದರಿ ಅರ್ಜಿಯನ್ನು ಪರಿಶೀಲಿಸಿದ National Mission on Monuments and Antiquities ಪ್ರಾಧಿಕಾರವು ಕಟ್ಟಡ ನಿರ್ಮಾಣಕ್ಕೆ ಅನುಮತಿಯನ್ನು ನೀಡಲಿದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂಕಇ 21 ಕೆಎಂಯು 95, ದಿ: 10.03.1998ರಲ್ಲಿ ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ ನಿಯಮಗಳು, 1965ರ ನಿಯಮ 11 ಮತ್ತು 12ರಡಿ ರಾಜ್ಯ ಸಂರಕ್ಷಿತ ಸ್ಮಾರಕದ ಹತ್ತಿರ ಅಥವಾ ಅದಕ್ಕೆ ಹೊಂದಿಕೊಂಡಿರುವ ಪ್ರದೇಶದಿಂದ 100 ಮೀಟರ್‌ಗಳು ಹಾಗೂ ತದನಂತರದ 200 ಮೀಟರ್‌ಗಳ ಅಂತರದಲ್ಲಿನ ಪ್ರದೇಶವನ್ನು ಗಣಿ ಕಾರ್ಯಾಚರಣೆ ಮತ್ತು ಇತರೇ ನಿರ್ಮಾಣ ಉದ್ದೇಶಗಳಿಗಾಗಿ ಅನುಕ್ರಮವಾಗಿ ನಿಷೇಧಿತ ಮತ್ತು ರಕ್ಷಿತ ಪ್ರದೇಶವೆಂದು ಘೋಷಿಸಿದೆ.<br><br>ನಿಬಂಧನೆ ಮೀರಿ ನಿರ್ಮಿಸುವ ಕಟ್ಟಡಗಳಿಗೆ ಭಾರತೀಯ ಪುರಾತತ್ವ ಸರ್ವೇಕ್ಷಣೆಯು ಮೇಲ್ಕಂಡ ಕಾಯ್ದೆ ಮತ್ತು ನಿಯಮಗಳನ್ವಯ ಸೂಕ್ತ ಕ್ರಮವನ್ನು ಸ್ಥಳೀಯ ಜಿಲ್ಲಾಡಳಿತ ಸಹಕಾರದೊಂದಿಗೆ ಕೈಗೊಳ್ಳುತ್ತದೆ. |

**TOR 241 TDV 2022**

(ಆನಂದ್ ಸಿಂಗ್)
ಪ್ರವಾಸೋದ್ಯಮ,
ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು